# “ಚಂದ್ರಯಾನ–3”

## ಚಂದ್ರನ ಮೇಲೆ ವಿಕ್ರಮ್ ಲ್ಯಾಂಡರ್ ಇಳಿಯುವಿಕೆಯ ನೇರ ಪ್ರಸಾರದ ಕಾರ್ಯಕ್ರಮ

**ದಿನಾಂಕ:** 23.08.2023 ರಂದು ಉಪ ಪ್ರಾದೇಶಿಕ ವಿಜ್ಞಾನ ಕೇಂದ್ರ, ಬಾಗಲಕೋಟೆಯಲ್ಲಿ, **ಉಪ ಪ್ರಾದೇಶಿಕ ವಿಜ್ಞಾನ ಕೇಂದ್ರ, ಬಾಗಲಕೋಟೆ ಹಾಗೂ ಭಾರತೀಯ ಬಾಹ್ಯಾಕಾಶ ಸಂಶೋಧನಾ ಕೇಂದ್ರ,** ಬೆಂಗಳೂರು ಇವರ ಸಂಯುಕ್ತ ಆಶ್ರಯದಲ್ಲಿ **“ಚಂದ್ರಯಾನ–3: ಚಂದ್ರನ ಮೇಲೆ ವಿಕ್ರಮ್ ಲ್ಯಾಂಡರ್ ಇಳಿಯುವಿಕೆಯ ನೇರ ಪ್ರಸಾರದ ಕಾರ್ಯಕ್ರಮ”** ಆಯೋಜಿಸಲಾಯಿತು, ಈ ಕಾರ್ಯಕ್ರಮದಲ್ಲಿ **ಸರ್ಕಾರಿ ಪ್ರೌಢ ಶಾಲೆ, ಸೀಮಿಕೇರಿ** ತಾ: ಜಿ: ಬಾಗಲಕೋಟೆಯ **ಒಟ್ಟು** 40 ವಿದ್ಯಾರ್ಥಿಗಳು ಮತ್ತು ಶಿಕ್ಷಕರು ಭಾಗವಹಿಸಿದ್ದರು.

ಕಾರ್ಯಕ್ರಮದ ಉದ್ಘಾಟಕರಾಗಿ ಆಗಮಿಸಿದ್ದ **ಡಾ. ಟಿ.ಬಿ.ಅಳ್ಳೊಳ್ಳಿ,** ಕುಲಸಚಿವರು ತೋ.ವಿ.ವಿ ಹಾಗೂ ಸದಸ್ಯ ಕಾರ್ಯದರ್ಶಿಗಳು ಉಪ ಪ್ರಾದೇಶಿಕ ವಿಜ್ಞಾನ ಕೇಂದ್ರ ಬಾಗಲಕೋಟೆ ಹಾಗೂ ಇತರ ಗಣ್ಯರು **ಸಸಿಗೆ ನೀರುಣಿಸುವ** ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಮುಂದುವರೆದು, ಉದ್ಘಾಟಕರ ಭಾಷಣ ಮಾಡಿದ **ಡಾ. ಟಿ.ಬಿ.ಅಳ್ಳೊಳ್ಳಿ,** ಕುಲಸಚಿವರು ತೋ.ವಿ.ವಿ ಹಾಗೂ ಸದಸ್ಯ ಕಾರ್ಯದರ್ಶಿಗಳು ಉಪ ಪ್ರಾದೇಶಿಕ ವಿಜ್ಞಾನ ಕೇಂದ್ರ ಬಾಗಲಕೋಟೆ ರವರು ವಿದ್ಯಾರ್ಥಿಗಳಿಗೆ ಚಂದ್ರಯಾನ–3 ರ ಮಹತ್ವದ ಮಾಹಿತಿಗಳನ್ನು ಹಾಗೂ ಅದರಿಂದಾಗುವ ಮಹತ್ತರ ಉಪಯೋಗಗಳನ್ನು ವಿದ್ಯಾರ್ಥಿಗಳಿಗೆ ತಿಳಿಯಪಡಿಸಿದರು. ಅದರಂತೆ, ವಿದ್ಯಾರ್ಥಿಗಳು ಬಾಹ್ಯಾಕಾಶ ಸಂಶೋಧನೆಗಳ ಬಗ್ಗೆ ಹೆಚ್ಚಿನ ಆಸಕ್ತಿಯನ್ನು ವಹಿಸಬೇಕೆಂದು ಕರೆ ನೀಡಿದರು.

ಕಾರ್ಯಕ್ರಮದ ಅತಿಥಿಗಳಾಗಿ ಆಗಮಿಸಿದಂತಹ **ಶ್ರೀ ಎಲ್ ಎಸ್ ಬೀಳಗಿ,** ಶಿಕ್ಷಕರು, ಸರ್ಕಾರಿ ಪ್ರೌಢಶಾಲೆ, ಸೀಮಿಕೇರಿ ರವರು ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿ, ISRO ಸಂಸ್ಥೆಯ ಕಾರ್ಯಕ್ರಮಗಳನ್ನು ವಿದ್ಯಾರ್ಥಿಗಳೊಂದಿಗೆ ಮೆಲುಕು ಹಾಕುವುದರ ಮೂಲಕ ಭಾರತದ ಬಾಹ್ಯಾಕಾಶದ ಸಾಧನೆಗಳನ್ನು ವಿದ್ಯಾರ್ಥಿಗಳಿಗೆ ತಿಳಿಯಪಡಿಸಿದರು ಹಾಗೂ ಸದರಿ ಕಾರ್ಯಕ್ರಮಕ್ಕೆ ತಮ್ಮ ಶಾಲೆಯನ್ನು ಆಯ್ಕೆ ಮಾಡಿಕೊಂಡಿದ್ದಕ್ಕಾಗಿ, ಉಪ ಪ್ರಾದೇಶಿಕ ವಿಜ್ಞಾನ ಕೇಂದ್ರಕ್ಕೆ ಹಾಗೂ ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಪ್ರೋತ್ಸಾಹಕ ಸೊಸೈಟಿ, ಬೆಂಗಳೂರು ರವರಿಗೆ ಧನ್ಯವಾದಗಳನ್ನು ತಿಳಿಸಿದರು.

ಮುಂದುವರೆದು, ವಿದ್ಯಾರ್ಥಿಗಳಿಗೆ ಹಾಗೂ ಸಾರ್ವಜನಿಕರಿಗಾಗಿ ಉಪ ಪ್ರಾದೇಶಿಕ ವಿಜ್ಞಾನ ಕೇಂದ್ರದ ಸಭಾಭವನದಲ್ಲಿ ಚಂದ್ರಯಾನ–3 ಯೋಜನೆಯ, ಚಂದ್ರನ ಮೇಲೆ ವಿಕ್ರಮ್ ಲ್ಯಾಂಡರ್ ಇಳಿಯುವಿಕೆಯ ನೇರ ಪ್ರಸಾರದ ವೀಕ್ಷಣೆಗೆ ವ್ಯವಸ್ಥೆ ಮಾಡಲಾಯಿತು, ಮುಂದುವರೆದು ವಿಕ್ರಮ್ ಲ್ಯಾಂಡರ್ ನ ಲ್ಯಾಂಡಿಂಗ್ ಪ್ರಕ್ರೀಯೆ ಯಶಸ್ವಿಯಾದ ಸಂದರ್ಭದಲ್ಲಿ ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಹರ್ಷೋದ್ಘಾರ ಸೂಚಿಸಿದರು.

ಮುಂದುವರೆದು, **ಶ್ರೀ ಈರಣ್ಣ ಬುಳ್ಳಾ,** ಕ್ಯೂರೇಟರ್, ಉಪ ಪ್ರಾದೇಶಿಕ ವಿಜ್ಞಾನ ಕೇಂದ್ರ ಬಾಗಲಕೋಟೆ ರವರು ನಿರೂಪಿಸಿದರು ಹಾಗೂ **ಶ್ರೀ ಆಸೀಫ ಬಾಗವಾನ,** ತಾಂತ್ರಿಕ ಸಹಾಯಕರು, ಉಪ ಪ್ರಾದೇಶಿಕ ವಿಜ್ಞಾನ ಕೇಂದ್ರ ಬಾಗಲಕೋಟೆ ರವರು ವಂದಿಸಿದರು,

ಕಾರ್ಯಕ್ರಮದಲ್ಲಿ, **ಸರ್ಕಾರಿ ಪ್ರೌಢ ಶಾಲೆ, ಸೀಮಿಕೇರಿ** ವಿದ್ಯಾರ್ಥಿಗಳು, ಸಾರ್ವಜನಿಕರು ಹಾಗೂ **ಶ್ರೀ ಗಂಗನಗೌಡ ಪಾಟೀಲ,** ದ್ವಿ.ದ.ಸಹಾಯಕರು ಉಪ ಪ್ರಾದೇಶಿಕ ವಿಜ್ಞಾನ ಕೇಂದ್ರ ಬಾಗಲಕೋಟೆ ರವರು ಉಪಸ್ಥಿತರಿದ್ದರು.


Live Telecast of Landing








Science and Technology Promotion










ವಿಜ್ಞಾನ ಕೇಂದ್ರ ಬಾಗಲಕೋಟೆ

*********